**All India Radio: Bangalore**
**Regional Bulletin In Kannada**
**10.01.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**10.01.2026 / 2.30 p.m.**

**<><><><>**

ಮುಖ್ಯಾಂಶಗಳು

1. ಕರಾವಳಿ ಪ್ರವಾಸೋದ್ಯಮಕ್ಕೆ ಸೂಕ್ತ ಪ್ರವಾಸೋದ್ಯಮ ನೀತಿ ಅಗತ್ಯ - ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್
2. ದುರ್ಗಮ ಪ್ರದೇಶಗಳಲ್ಲಿ ಆರೋಗ್ಯ ಸೇವೆಗೆ ಸಂಚಾರಿ ಆರೋಗ್ಯ ಘಟಕಗಳಿಗೆ ಚಾಲನೆ ನೀಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್
3. ಈ ತಿಂಗಳ ಅಂತ್ಯದೊಳಗೆ ಇಂದಿರಾ ಕಿಟ್ ವಿತರಣೆ - ಆಹಾರ ಸಚಿವ ಕೆ.ಎಚ್.ಮುನಿಯಪ್ಪ
4. ಉಳಿತಾಯದ ಅಭ್ಯಾಸವು ಭವಿಷ್ಯದ ಭದ್ರತೆಯ ಮೂಲ ಆಧಾರ -ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

<><><><>

ರಾಜ್ಯದ ಕರಾವಳಿ ಪ್ರದೇಶದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ವಿಪುಲ ಅವಕಾಶಗಳಿದ್ದು, ಇದಕ್ಕಾಗಿ ಸೂಕ್ತ ಪ್ರವಾಸೋದ್ಯಮ ನೀತಿಯ ಅಗತ್ಯವಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮಂಗಳೂರು ಹೊರವಲಯದ ಪಿಲಿಕುಳದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ವತಿಯಿಂದ ಅಭಿವೃದ್ಧಿಪಡಿಸಲಾದ 'ಪಿಲಿಕುಳ ರೆಸಾರ್ಟ್'ನ ಉದ್ಘಾಟನಾ ಕಾರ್ಯಕ್ರಮದ ಸಂದರ್ಭ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸಕ್ತ ಪ್ರವಾಸೋದ್ಯಮ ನೀತಿ ಕರಾವಳಿಗೆ ಪೂರಕವಾಗಿಲ್ಲ ಎಂಬುದನ್ನು ಪ್ರವಾಸೋದ್ಯಮ ಸಚಿವರ ಗಮನಕ್ಕೂ ತರಲಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರವೂ ಈ ಭಾಗದ ಅಭಿವೃದ್ಧಿಗೆ ವಿಶೇಷ ಆಸಕ್ತಿ ತೋರಿಸಬೇಕು. ವಿದೇಶಗಳಲ್ಲಿ ಹಾಗೂ ಬೆಂಗಳೂರಿನಲ್ಲಿ ನೆಲೆಸಿರುವ ಅನೇಕ ಉದ್ಯಮಿಗಳು ತಮ್ಮ ಹುಟ್ಟೂರಿನ ಅಭಿವೃದ್ಧಿಗೆ ಹೂಡಿಕೆ ಮಾಡಲು ಸಿದ್ಧರಿದ್ದಾರೆ. ಕರಾವಳಿಯ ಯುವಕರಲ್ಲಿ ಸಾಮರ್ಥ್ಯ ಇದೆ. ಅವರು ವಿದೇಶಗಳಲ್ಲಿ ತಮ್ಮ ನೈಪುಣ್ಯತೆ ತೋರಿಸುತ್ತಿದ್ದಾರೆ. ಇದನ್ನು ಬಳಸಿಕೊಂಡು ಕರಾವಳಿ ಮತ್ತು ಮಲೆನಾಡಿಗೆ ಸೂಕ್ತ ಪ್ರವಾಸೋದ್ಯಮ ನೀತಿ

ರೂಪಿಸಬೇಕು ಎಂದು ಉಪಮುಖ್ಯಮಂತ್ರಿ ತಿಳಿಸಿದ್ದಾರೆ. ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಅಪಾರ ಪ್ರಕೃತಿ ಸಂಪತ್ತು ಇದ್ದರೂ ಅದನ್ನು ಸಮರ್ಪಕವಾಗಿ ಬಳಸಿಕೊಳ್ಳುವಲ್ಲಿ ಹಿಂದುಳಿದಿದೆ. ಕೇರಳ ಮತ್ತು ಗೋವಾ ತಮ್ಮ ಕರಾವಳಿ ಸಂಪತ್ತನ್ನು ಪ್ರವಾಸೋದ್ಯಮದ ಮೂಲಕ ಯಶಸ್ವಿಯಾಗಿ ಸದುಪಯೋಗಪಡಿಸಿಕೊಂಡಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

<><><>

ರಾಜ್ಯಾದ್ಯಂತ ಒಟ್ಟು ೮೧ ಸಂಚಾರಿ ಆರೋಗ್ಯ ಘಟಕ ವಾಹನಗಳಿಗೆ ಚಾಲನೆ ನೀಡಲಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ದುರ್ಗಮ ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿ ಮನೆಬಾಗಿಲಲ್ಲೇ ಅರೋಗ್ಯ ಸೇವೆಗಳನ್ನು ನೀಡುವ ಉದ್ದೇಶದಿಂದ ಸ್ಥಾಪಿಸಲಾಗಿರುವ ಸಂಚಾರಿ ಅರೋಗ್ಯ ಘಟಕಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೫ ಹಾಗೂ ಉಡುಪಿ ಜಿಲ್ಲೆಯಲ್ಲಿ ೪ ಸಂಚಾರಿ ಅರೋಗ್ಯ ಘಟಕ ವಾಹನಗಳು ಕಾರ್ಯಾಚರಿಸಲಿವೆ. ಈ ಯೋಜನೆ ರಾಜ್ಯ ಸರಕಾರದ ಜನಪರ ಯೋಜನೆಗಳ ಭಾಗವಾಗಿದೆ ಎಂದು ಹೇಳಿದ್ದಾರೆ. ಈ ವಾಹನದಲ್ಲಿ ಒಬ್ಬ ವೈದ್ಯರು, ಒಬ್ಬರು ನರ್ಸ್ ಮತ್ತು ಒಬ್ಬ ಲ್ಯಾಬ್ ಟೆಕ್ನಿಷಿಯನ್ ಇರಲಿದ್ದು, ಅಗತ್ಯವಿರುವ ಔಷದಿಗಳು, ಸಲಕರಣೆಗಳು, ತುರ್ತು ಅರೋಗ್ಯ ಪರಿಸ್ಥಿತಿಯ ನಿರ್ವಹಣೆಗೆ ಅವಶ್ಯಕ ಔಷಧಿಗಳೊಂಧಿಗೆ ಈ ಅರೋಗ್ಯ ಸೇತು ವಾಹನವನ್ನು ಸಜ್ಜುಗೊಳಿಸಲಾಗಿದೆ ಎಂದು ಸಚಿವರು ತಿಳಿಸಿದರು.

<><><>

ಬಿಪಿಎಲ್ ಪಡಿತರದಾರರಿಗೆ ಇಂದಿರಾ ಕಿಟ್ ವಿತರಣೆ ಮಾಡುವ ಯೋಜನೆ, ಟೆಂಡರ್ ಹಂತದಲ್ಲಿದ್ದು, ಈ ತಿಂಗಳ ಅಂತ್ಯಕ್ಕೆ ಇಲ್ಲವೇ ಫೆಬ್ರವರಿ ತಿಂಗಳಲ್ಲಿ ಪಡಿತರ ಅಕ್ಕಿ ಜತೆಗೆ ಇಂದಿರಾ ಕಿಟ್ ವಿತರಿಸಲಾಗುವುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಮಾತನಾಡಿದ ಅವರು, ಐದು ಕೆ.ಜಿ ಅಕ್ಕಿಯ ಜೊತೆಗೆ ಇಂದಿರಾ ಕಿಟ್ ಮೂಲಕ ತೊಗರಿ ಬೇಳೆ, ಸಕ್ಕರೆ, ಉಪ್ಪು ವಿತರಿಸಲಾಗುವುದು. ಈ ಕುರಿತ ಪ್ರಕ್ರಿಯೆಗಳು ಟೆಂಡರ್ ಹಂತದಲ್ಲಿದೆ ಎಂದು ತಿಳಿಸಿದ್ದಾರೆ. ಅನರ್ಹರ ಬಿಪಿಎಲ್ ಕಾರ್ಡ್ ರದ್ದಾಗಿದ್ದರೆ ಕೂಡಲೇ ತಹಶೀಲ್ದಾರ್ ಅವರನ್ನು ಭೇಟಿ ಮಾಡಿ ಅರ್ಜಿ ಸಲ್ಲಿಸಿದರೆ ೧೫ ದಿನಗಳ ಒಳಗೆ ಪಡಿತರ ಕಾರ್ಡ್ ವಿತರಿಸಲಾಗುತ್ತದೆ. ಬೆಂಬಲ ಬೆಲೆ ಯೋಜನೆಯಡಿ ರಾಗಿ ಬೆಳೆ ನೋಂದಣಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸುಮಾರು ೨ ಸಾವಿರದ ೫೦೦ ರೈತರು

ಬಾಕಿ ಉಳಿದಿದ್ದು, ಅವರ ನೋಂದಣಿ ಕುರಿತಂತೆ ಉಪ ಸಮಿತಿಯಲ್ಲಿ ಚರ್ಚಿಸಿ ನಂತರ ತೀರ್ಮಾನಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

<><><>

ಅಂಚೆ ಕಚೇರಿಗಳು ಗ್ರಾಮೀಣ ಜನತೆಯ ನಂಬಿಕೆಯ ಹಣಕಾಸು ಸಂಸ್ಥೆಗಳಾಗಿ ಸೇವೆ ಸಲ್ಲಿಸುತ್ತಿದ್ದು, ಉಳಿತಾಯದ ಅಭ್ಯಾಸವು ಭವಿಷ್ಯದ ಭದ್ರತೆಯ ಮೂಲ ಆಧಾರವಾಗಿದೆ ಎಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು. ದಾವಣಗೆರೆ ತಾಲ್ಲೂಕಿನ ಶಾಮನೂರಿನಲ್ಲಿ ನೂತನ ಉಪ ಅಂಚೆ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತೀಯ ಅಂಚೆ ಇಲಾಖೆಯ ಅಂಚೆ ಉಳಿತಾಯ ಬ್ಯಾಂಕ್ ಸೇವೆಗಳು, ವಿವಿಧ ಹಣಕಾಸು ಸೇವೆಗಳು ಹಾಗೂ ಅಂಚೆ ಚೀಟಿ ಸಂಗ್ರಹಣೆ ಸೇವೆಗಳ ಮಹತ್ವವನ್ನು ವಿವರಿಸಿದರು. ಇಂದೇ ಉಳಿತಾಯ ಆರಂಭಿಸಿದರೆ ನಾಳೆಯ ಶಿಕ್ಷಣ ಮತ್ತು ಬದುಕು ಸುಭದ್ರವಾಗುತ್ತದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಕನಿಷ್ಠ ಒಂದು ಆರ್‌ಡಿ ಮತ್ತು ಎಸ್‌ಬಿ ಖಾತೆ ತೆರೆಯಬೇಕು ಎಂದು ಅವರು ಕರೆ ನೀಡಿದರು.

<><><>

ಆರೋಗ್ಯಕರ ಸಮಾಜ ನಿರ್ಮಾಣ, ಭಾರತದ ಅಭಿವೃದ್ಧಿ ಹಾಗೂ ಇಡೀ ಮಾನವ ಕುಲದ ಉದ್ಧಾರ ಆಗಬೇಕಾದರೆ ಸೌಹಾರ್ದತೆಯ ಜೀವನ ಕ್ರಮ  ಎಲ್ಲರೂ ಅನುಸರಿಸಬೇಕು. ಈ ಹಿನ್ನೆಲೆಯಲ್ಲಿ ಬರಗೂರು ರಾಮಚಂದ್ರಪ್ಪ ಅವರ ಕೃತಿ ಉತ್ತಮ ಸಂದೇಶ ಹೊಂದಿದೆ ಎಂದು ಪರಿಸರವಾದಿ, ಸಾಮಾಜಿಕ ಕಾರ್ಯಕರ್ತ ಡಾಕ್ಟರ್ ಶಿವಾಜಿ ವಕಾಗಣಿಕರ ಸೂಚಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸಾಹಿತಿ ಪ್ರೊಫೆಸರ್ ಬರಗೂರು ರಾಮಚಂದ್ರಪ್ಪ ಅವರ "ಸೌಹಾರ್ದ ಭಾರತ" ಕೃತಿಯನ್ನು ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು. ಚಿಂತಕ ಪ್ರೊಫೆಸರ್ ಯಲ್ಲಪ್ಪ ಹಿಮ್ಮಡಿ ಕೃತಿ ಪರಿಚಯ ಮಾಡಿದರು.

<><><>

ಸಿದ್ಧಗಂಗಾಮಠದ ಡಾ.ಶ್ರೀಶಿವಕುಮಾರಸ್ವಾಮೀಜಿ ಅವರ ಏಳನೇ ಸಂಸ್ಮರಣೋತ್ಸವದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಪಾಲ್ಗೊಳ್ಳಲಿದ್ದಾರೆ ಎಂದು ಕೇಂದ್ರ ಜಲಶಕ್ತಿ ಮತ್ತು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು. ಸಿದ್ಧಗಂಗಾ ಮಠಕ್ಕೆ ಇಂದು ಭೇಟಿ ನೀಡಿ ಡಾ.ಶ್ರೀ ಶಿವಕುಮಾರ ಸ್ವಾಮೀಜಿ ಗದ್ದುಗೆ ದರ್ಶನ ಪಡೆದು ಪೂಜೆ ಸಲ್ಲಿಸಿ ನಂತರ ಮಠದಲ್ಲಿ ಸಿದ್ದಲಿಂಗಸ್ವಾಮಿಜಿಗಳ ಆಶೀರ್ವಾದ ಪಡೆದ ನಂತರ, ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮಠದ

ಶ್ರೀಗಳ ಹಾಗೂ ಅಧಿಕಾರಿಗಳ ಸಭೆ ನಡೆಸಿ ಎಲ್ಲಾ ಸಿದ್ಧತೆಗಳನ್ನು ಕೈಗೊಂಡು ಕಾರ್ಯಕ್ರಮ ಸುಸೂತ್ರವಾಗಿ ನಡೆಸುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಶಾಸಕರಾದ ಜಿ.ಬಿ.ಜ್ಯೋತಿ ಗಣೇಶ್, ಬಿ.ಸುರೇಶ್ ಗೌಡ, ಜಿಲ್ಲಾಧಿಕಾರಿ ಶುಭಾಕಲ್ಯಾಣ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಶೋಕ್.ಕೆ ಮತ್ತಿತರರು ಉಪಸ್ಥಿತರಿದ್ದರು.

<><><><>

ಕಾಡುಹಂದಿ ಬೇಟೆಗೆಂದು ಹಾಕಿದ್ದ ಉರುಳಿಗೆ ಹೆಣ್ಣು ಚಿರತೆಯೊಂದು ಸಿಲುಕಿ ಸಾವನ್ನಪ್ಪಿರುವ ಘಟನೆ ನಿನ್ನೆ ರಾತ್ರಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಗೊಲ್ಲಹಳ್ಳಿ ಅರಣ್ಯಪ್ರದೇಶದಲ್ಲಿ ನಡೆದಿದೆ. ಸ್ಥಳಕ್ಕೆ ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಚಿರತೆ ಸಾವಿಗೆ ಕಾರಣರಾದವರನ್ನು ಪತ್ತೆ ಹಚ್ಚಿ ಕಾನೂನು ಕ್ರಮ ಕೈಗೊಳ್ಳುವುದಾಗಿ ಅರಣ್ಯ ಇಲಾಖೆ ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿ ಗಿರೀಶ್ ತಿಳಿಸಿದ್ದಾರೆ.

<><><><>

ಮಂಗಳೂರಿನಲ್ಲಿ ಎರಡು ದಿನಗಳ ಕಾಲ ಭಾರತ್ ಫೌಂಡೇಶನ್ ನೇತೃತ್ವದಲ್ಲಿ ಆಯೋಜನೆಯಾಗಿರುವ ಸಾಹಿತ್ಯ ಹಬ್ಬ-ಲಿಟ್ ಫೆಸ್ಟ್‌ಗೆ ಶತಾವಧಾನಿ ಡಾ. ಆರ್. ಗಣೇಶ್ ಇಂದು ಚಾಲನೆ ನೀಡಿದರು. ಸಾಹಿತಿ ಅಜಕ್ಕಳ ಗಿರೀಶ್ ಭಟ್ ಸಂವಾದ ನಡೆಸಿಕೊಟ್ಟರು. ಇದೇ ಸಂದರ್ಭ ರಾಜ್ಯಸಭಾ ಸದಸ್ಯರಾದ ಮೀನಾಕ್ಷಿ ಜೈನ್ ಅವರಿಗೆ ಲಿಟ್ ಫೆಸ್ಟ್ ೨೦೨೯ನೇ ಆವೃತ್ತಿಯ ವಿಶೇಷ ಪ್ರಶಸಿಯನ್ನು ಪ್ರದಾನ ಮಾಡಲಾಯಿತು. ಎರಡು ದಿನಗಳ ಸಾಹಿತ್ಯ ಹಬ್ಬದಲ್ಲಿ ಸಾಹಿತ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪರಿಣತಿ ಹೊಂದಿದ ದೇಶದ ಪ್ರಮುಖರು ತಮ್ಮ ಚಿಂತನೆಯನ್ನು ಪ್ರಸ್ತುತಪಡಿಸಲಿದ್ದಾರೆ.

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ಸಂಕ್ರಾಂತಿ ಹಬ್ಬದ ಪ್ರಯುಕ್ತ ಜಿಲ್ಲಾ ಪಂಚಾಯಿತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಹಯೋಗದೊಂದಿಗೆ ಸಂಜೀವಿನಿ ಎನ್.ಆರ್.ಎಲ್.ಎಂ ಯೋಜನೆಯಡಿ ಸ್ವಸಹಾಯ ಗುಂಪುಗಳ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಉದ್ಘಾಟಿಸಿದರು. ಸಂಕ್ರಾಂತಿ ಹಬ್ಬದ ಪ್ರಯುಕ್ತ ಸ್ವಸಹಾಯ ಗುಂಪುಗಳ ಉತ್ಪನ್ನಗಳಿಗೆ ಮಾರುಕಟ್ಟೆಯನ್ನು ಕಲ್ಪಿಸುವುದು, ಗ್ರಾಮೀಣ ಮಹಿಳಾ ಉದ್ದಿಮೆದಾರರು

ಉತ್ಪಾದಿಸಿದ ಉತ್ಪನ್ನಗಳನ್ನು ಖರೀದಿಸಿ, ಮಹಿಳಾ ಉದ್ದಿಮೆದಾರರನ್ನು ಪ್ರೋತ್ಸಾಹಿಸುವುದು, ಮಹಿಳೆಯರು ಸ್ವಾವಲಂಬಿಯಾಗಿ ದುಡಿದು ಆರ್ಥಿಕವಾಗಿ ಸಧೃಡರಾಗಬೇಕು ಎನ್ನುವ ಉದ್ದೇಶದಿಂದ ಮಾರಾಟ ಮೇಳವನ್ನು ಆಯೋಜಿಸಲಾಗಿದ್ದು, ಮಹಿಳೆಯರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

<><><>

ನೈಋತ್ಯ ರೈಲ್ವೆ ಬೆಂಗಳೂರು ವಿಭಾಗವು ಇಂದು ಬೆಂಗಳೂರಿನ ಎಂ.ಜಿ. ರೈಲ್ವೆ ಕಾಲೋನಿಯ ಅನುಗ್ರಹ ಸಮುದಾಯ ಭವನದಲ್ಲಿ ನೈಋತ್ಯ ರೈಲ್ವೆ ಅಂತರ ವಿಭಾಗೀಯ ನಾಟಕ ಸ್ಪರ್ಧೆಯನ್ನು ಆಯೋಜಿಸಿತ್ತು. ಬೆಂಗಳೂರು, ಮೈಸೂರು, ಹುಬ್ಬಳ್ಳಿ ವಿಭಾಗ ಮತ್ತು ಹುಬ್ಬಳ್ಳಿ ವರ್ಕ್ ಶಾಪ್ ತಂಡಗಳು ಈ ನಾಟಕ ಸ್ಪರ್ಧೆಯಲ್ಲಿ ಭಾಗವಹಿಸಿದ್ದವು. ಸ್ಪರ್ಧೆಯನ್ನು ಉದ್ಘಾಟಿಸಿದ ಮಾತನಾಡಿದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಅಶುತೋಷ್ ಕುಮಾರ್ ಸಿಂಗ್ ಇಂತಹ ಸ್ಪರ್ಧೆಗಳು ಉದ್ಯೋಗಿಗಳಲ್ಲಿ ಪ್ರತಿಭೆ ಮತ್ತು ಕಲಾತ್ಮಕತೆಯನ್ನು ಪ್ರೋತ್ಸಾಹಿಸುತ್ತವೆ ಎಂದರು. ಈ ಸ್ಪರ್ಧೆಯಲ್ಲಿ ರಂಗಭೂಮಿ ಮತ್ತು ಕಿರುತೆರೆ ಕಲಾವಿದೆ ಸುನೇತ್ರಾ ಪಂಡಿತ್ ಮತ್ತು ಹಿರಿಯ ನಾಟಕ ಸಂಶೋಧಕ ಡಾ. ಟಿ.ಎಸ್. ನರಸಿಂಹ ಪ್ರಸಾದ್ ತೀರ್ಪುಗಾರರಾಗಿದ್ದರು. ಕಿರುತೆರೆ ಮತ್ತು ರಂಗಭೂಮಿ ಕಲಾವಿದ ರಮೇಶ್ ಪಂಡಿತ್ ಅತಿಥಿಯಾಗಿ ಭಾಗವಹಿಸಿದ್ದರು. ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರುಗಳಾದ ಪರೀಕ್ಷಿತ್ ಮೋಹನಪುರಿಯಾ, ಪ್ರವೀಣ್ ಕಾತರಕಿ ಸೇರಿದಂತೆ ಹಲವು ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

<><><>

ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಅರ್ಥಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗವು, ವಿದ್ಯಾರ್ಥಿಗಳಿಗಾಗಿ "ಮೂಲಭೂತ ಅರ್ಥಮಾಪನಶಾಸ್ತ್ರ" ವಿಷಯದ ಕುರಿತು ಎರಡು ದಿನಗಳ ಕಾರ್ಯಗಾರ ಆಯೋಜಿಸಿತ್ತು. ಉದ್ಘಾಟನಾ ಸಮಾರಂಭದ ಪ್ರಾಸ್ತಾವಿಕ ಭಾಷಣದಲ್ಲಿ ವಿಭಾಗದ ಮುಖ್ಯಸ್ಥ ಪ್ರೊ ರಿತಿಕಾ ಸಿನ್ಹಾ ಕಾರ್ಯಾಗಾರದ ಉದ್ದೇಶಗಳನ್ನು ಪ್ರಸ್ತುತಪಡಿಸಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕುಲಪತಿ ಪ್ರೊ ರಮೇಶ್.ಬಿ. ಭಾಗವಹಿಸಿದ್ದರು.

<><><>

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ೪ನೇ ಕುಲಪತಿಯಾಗಿ ಪ್ರೊ.ಬಿ.ಕೆ.ರವಿ ನಿನ್ನೆ ಟಮಕದಲ್ಲಿರುವ ವಿಶ್ವವಿದ್ಯಾಲಯದ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದರು. ಬೆಂಗಳೂರು ಸಂವಹನ ವಿಭಾಗದ ಮುಖ್ಯಸ್ಥರಾಗಿದ್ದ ಬಿ.ಕೆ.ರವಿ ವಿಶ್ವವಿದ್ಯಾಲಯದಲ್ಲಿಯೇ ಕುಲಸಚಿವರಾಗಿ ಸೇವೆ ಸಲ್ಲಿಸಿದ್ದರು. ಪ್ರಸ್ತುತ ಕೊಪ್ಪಳದ ಕನ್ನಡ ವಿಶ್ವವಿದ್ಯಾಲಯದ ಕುಲಪತಿಯಾಗಿದ್ದ ಅವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಡಾ.ಕುಮುದಾರಿಂದ ಅಧಿಕಾರ ಸ್ವೀಕಾರ ಮಾಡಿದರು.

<><><><>

ಸಮಾಜದಲ್ಲಿ ಸಂವಿಧಾನ ಜಾಗೃತಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಉದ್ದೇಶದಿಂದ ಬಹುರೂಪಿ ನಾಟಕೋತ್ಸವ ಅಂಗವಾಗಿ ಬೀದಿ ನಾಟಕ ಪ್ರದರ್ಶನ ಕಾರ್ಯಕ್ರಮ ಇಂದು ಮೈಸೂರು ನಗರದ ಚಿಕ್ಕ ಗಡಿಯಾರದ ಬಳಿ ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಹಿರಿಯ ರಂಗ ನಿರ್ದೇಶಕ ಹಾಗೂ ಕಲಾವಿದ ಮೈಮ್ ರಮೇಶ್ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಡಾ.ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆ, ಸಂವಿಧಾನದ ಮೌಲ್ಯಗಳು ಹಾಗೂ ಮಾನವೀಯತೆಯ ಸಂದೇಶಗಳನ್ನು ಜನರಿಗೆ ತಲುಪಿಸಲು ಬೀದಿ ನಾಟಕ ಅತ್ಯಂತ ಪರಿಣಾಮಕಾರಿ ಮಾಧ್ಯಮವಾಗಿದೆ ಎಂದರು. ಕಾರ್ಯಕ್ರಮದಲ್ಲಿ ರಂಗಾಯಣ ನಿರ್ದೇಶಕ ಸತೀಶ್ ತಿಪಟೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ, ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>